ಶ್ರೀ ಬಸವರಾಜ ಬೊಮ್ಮಾಯಿ : ಮನ್ಯ ಸುರೇಶ್‌ಗೌಡರಿಗೆ ನಾನು ಹೇಳುವುದೇನೆಂದರೆ, ಇದರಿಂದ ಈಗಿರುವಂಥ ಯಾವುದೇ ಯೋಜನೆಗಳಿಗೆ ಮತ್ತು tail end ಪ್ರದೇಶಗಳಿಗೆ ಯಾವುದೇ ರೀತಿ ತೊಂದರೆಯಾಗದಂತೆ ನಾವು ನಿಗಾ ವಹಿಸಿದ್ದೇವೆಯಾದ್ದರಿಂದ ಯಾವುದೇ ರೀತಿಯ ತೊಂದರೆ ಯಾಗುವುದಿಲ್ಲ.

ಅಧ್ಯಕ್ಷರು : ಮಾನ್ಯ ಸಚಿವರು ಈಗಾಗಲೇ ಹೇಳಿದ್ದಾರಲ್ಲ. ನೀವು ಮತ್ತೆ ಮತ್ತೆ ಅದನ್ನೇ ಕೇಳಬೇಡಿ. ದಯವಿಟ್ಟು ಕುಳಿತುಕೊಳ್ಳಿ.

ಶ್ರೀ ಎಂ.ಟಿ. ಕೃಷ್ಣಪ್ಪ : ಮಾನ್ಯ ಜಲಸಂಪನ್ಮೂಲ ಸಚಿವರು ಏತ ನೀರಾವರಿ ಯೋಜನೆಯನ್ನು ಮಂಜೂರು ಮಾಡಿದ್ದಾರೆ. ಅದಕ್ಕಾಗಿ ನಾನು ಅವರಿಗೆ ಅಭಿನಂದನೆಯನ್ನು ಸಲ್ಲಿಸಿದ್ದೇನೆ. ಆದರೆ ಅದು ಕಾರ್ಯ ಶುರುವಾಗಿಲ್ಲ.

ಅಧ್ಯಕ್ಷರು : ಹಾಲಿ ಪ್ರಶ್ನೆಗೆ ಪೂರಕವಾಗಿ ನೀವು ಉಪ ಪ್ರಶ್ನೆಯನ್ನು ಕೇಳಿದರೆ ಪರವಾಗಿಲ್ಲ ಆದರೆ ಅದನ್ನು ಬಿಟ್ಟು ನೀವು ಹೊಸದಾಗಿ ಪ್ರಶ್ನೆ ಕೇಳಿದರೆ ನಿಮಗೆ ಉತ್ತರ ಕೊಡಲು ಅವರ ಹತ್ತಿರ ಎಲ್ಲಿದೆ ಉತ್ತರ?

ಶ್ರೀ ಎಂ.ಟಿ. ಕೃಷ್ಣಪ್ಪ : ಮಾನ್ಯ ಅಧ್ಯಕ್ಷರೆ, ಈಗ ಸಾವಿರ, ಸಾವಿರದ ಇನ್ನೂರ ಅಡಿಯವರೆಗೆ ಹೋದರೂ ಕೂಡ ನೀರು ಸಿಗುತ್ತಿಲ್ಲ. ಕುಡಿಯುವ ನೀರಿಗೆ ಬಹಳ ಕಷ್ಟ ಪರಿಸ್ಥಿತಿಯಿದೆ. ಆದುದರಿಂದ ಕೆರೆ ಕಾಮಗಾರಿಯನ್ನು ಬೇಗ ಕೈಗೆತ್ತಿಕೊಳ್ಳಬೇಕೆಂದು ತನ್ನ ಮೂಲಕ ಮಾನ್ಯ ಸಚಿವರಿಗೆ ಒತ್ತಾಯ ಮಾಡುತ್ತೇನೆ.

(ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ಉತ್ತರಗಳು :

ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, ದಿನಾಂಕ: 26.03.2012ರ 1ನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 37 ಪ್ರಶ್ನೆಗಳ ಪೈಕಿ 21 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು (ಅನುಬಂಧ–I)

ಶ್ರೀ ಸಿದ್ದರಾಮಯ್ಯ (ವಿರೋಧ ಪಕ್ಷದ ನಾಯಕರು) : ಮಾನ್ಯ ಅಧ್ಯಕ್ಷರೆ, ಪಿ.ಯು.ಸಿ. ಪ್ರಶ್ನೆ ಪತ್ರಿಕೆಗಳು ಲೀಕ್ ಔಟ್ ಆಗಿರುವ ಬಗ್ಗೆ ಮತ್ತು ಕಾವೇರಿ ನೀರನ್ನು ಬಿಡಬಾರದೆನ್ನುವ ಬಗ್ಗೆ ಶೂನ್ಯವೇಳೆಯಲ್ಲಿ ಪ್ರಸ್ತಾಪ ಮಾಡಲು ಈಗಾಗಲೇ ನೋಟಿಸ್ ಕೊಟ್ಟಿದ್ದೇನೆ.